# FA 1 ಕೀ ಉತ್ತರಗಳು

ಪ್ರ.I.

1. ಸಿ) ಅನುನಾಸಿಕ

2. ಬಿ) ಆದೇಶ ಸಂಧಿ

3. ಎ) ಅಪಾದಾನ

ಪ್ರ.II

4. ಗಡಿ ಪ್ರದೇಶದಲ್ಲಿ ವಿಮಾನ ದಾಳಿಯಿಂದ ರಕ್ಷಿಸಿಕೊಳ್ಳಲು 'ಬ್ಲಾಕ್ ಔಟ್' ನಿಯಮವನ್ನುಪಾಲಿಸಲಾಗುತ್ತದೆ.

5. ನದಿ ಜಲಗಳು ಕಲುಷಿತವಾಗಿವೆ.

ಪ್ರ.III

6. ಮಹಿಳೆ ಯಾವ ರೀತಿಯ ಅಪಾಯದಲ್ಲಿ ಸಿಲುಕಿದಳು? ಆ ಮನೆಯೊಳಗೆ ಏನು ಕಾಣಿಸುತ್ತದೆ? ತಾನೀಗ ಈ ಕದವನ್ನು ತಟ್ಟಿದರೆ ಪರಿಣಾಮವಾಗಬಹುದೇ? ಆ ಮನೆಯಿಂದ ಒಂದು ಬೆಳಕಿನ ಕಿರಣವೂ ಹೊರಗೆ ಹಾಯ ಕಾಣುತ್ತದೆ. ಗಡಿ ಪ್ರದೇಶದಲ್ಲಿ ವಿಮಾನ ದಾಳಿಯಿಂದ ರಕ್ಷಿಸಲು ಬ್ಲಾಕ್ ಔಟ್ ನಿಯಮ ಪಾಲಿಸಲಾಗುತ್ತಿದೆ. ಇಂತಹ ಈ ಸಮಯದಲ್ಲಿ ಆ ಮನೆಯೊಳಗೆ ಯಾವ ರೀತಿಯ ಕ್ರೌರ್ಯ ನಡೆಯುತ್ತಿದೆ? ಎಂದು ಪಹಿಳೆಯ ಆರ್ತನಾದ ಕೇಳಿದ ರಾಹಿಲನು ಯೋಚಿಸಿದನು.

7. ವಿವೇಕಾನಂದರಿಗೆ ಹಿಂದುಳಿದ ಹಾಗೂ ದಲಿತ ಜಾತಿಗಳ ಬಗ್ಗೆ ಅವರಿಗೆ ಸಹಜವಾದ ಸಾಮಾಜಿಕ ಕಳಕಳಿ ಇತ್ತು. ಹೀಗಾಗಿಯೇ ಅವರು ಸಂಶಯಕ್ಕೆಡೆಯಿಲ್ಲದಂತೆ ಜಾತಿ ಮತ್ತು ವರ್ಗವನ್ನು ವಿರೋಧಿಸಿದರು. ಅವರು "ಜಾತಿ ಎಂಬುದು ಸಮಾಜದ ಒಂದು ಆಂತರಿಕ ಭಾಗವಾಗಿದೆ. ಹಿಂದೆ ಅದು ವಿಕಾಸವಾಗುತ್ತಿತ್ತು. ಈಗ ಅದು ಘನೀಭೂತವಾಗಿದೆ. ಅದರ ದುರ್ಗಂಧದಿಂದ ಭಾರತದ ವಾತಾವರಣವೆಲ್ಲ ತುಂಬಿದೆ. ಜಾತಿ ವ್ಯವಸ್ಥೆಯ ಕ್ರೌರ್ಯಕ್ಕೆ ತುತ್ತಾಗಿ ಶೂದ್ರರು, ಅಶ್ಪøಶ್ಯರು ಸ್ವಾತಂತ್ರ್ಯಹೀನರಾಗಿ ಗುಲಾಮತನ ಅನುಭವಿಸುತ್ತಿದ್ದಾರೆ" ಎಂಬುದು ಜಾತಿ ವ್ಯವಸ್ಥೆಯ ಬಗ್ಗೆ ಸ್ವಾಮಿ ವಿವೇಕಾನಂದರ ಅಭಿಪ್ರಾಯವಾಗಿದೆ.

ಪ್ರ.IV

8. **ಆಯ್ಕೆ :-** ಈ ವಾಕ್ಯವನ್ನು ಕವಿ 'ಜಿ.ಎಸ್. ಶಿವರುದ್ರಪ್ಪ' ಅವರು ರಚಿಸಿರುವ 'ಎದೆತುಂಬಿ ಹಾಡಿದೆನು' ಕವನ ಸಂಕಲನದಿಂದ ಆಯ್ದ 'ಸಂಕಲ್ಪಗೀತೆ'ಎಂಬ ಪದದಿಂದ ಆರಿಸಲಾಗಿದೆ.

**ಸಂದರ್ಭ :** ಕುಸಿದು ಹೋಗಿರುವ ಮೌಲ್ಯಗಳನ್ನು ಮತ್ತೆ ಎಬ್ಬಿಸಿ ನಿಲ್ಲಿಸಬೇಕು. ಬಡತನ, ಅಜ್ಞಾನದ ಮೂಢನಂಬಿಕೆ, ಧರ್ಮ, ಭಾಷೆ, ಜಾತಿಗಳಿಂದ ಶೋಷಣೆಗೊಳಗಾದವರನ್ನು ಎಲ್ಲರಂತೆ ಸಮಾನವಾಗಿ ಬದುಕಲು ಹೊಸ ಭರವಸೆಗಳನ್ನು ಕಟ್ಟಿ ಕೊಡಬೇಕು ಸಂದರ್ಭದಲ್ಲಿ ಈ ಮಾತು ಬಂದಿದೆ.

**ಸ್ವಾರಸ್ಯ :-** ಮೌಲ್ಯಗಳನ್ನು ಪುನರ್ ಸ್ಥಾಪಿಸುವ, ಹಾಗೂ ಶೋಷಿತರ ಬದುಕಿಗೆ ¨ಭರವಸೆ ತುಂಬುವ ಸಂಕಲ್ಪ ಬೇಕು ಸ್ವಾರಸ್ಯಪೂರ್ಣವಾಗಿ ಅಭಿವ್ಯಕ್ತಪಡಿಸುತ್ತಾರೆ.

ಪ್ರ.V

9. ನೀಲಮೇಘಮಂಡಲ-ಸಮ ಬಣ್ಣ

ಮುಗಿಲಿಗೆ ರೆಕ್ಕೆಗಳೊಡೆದವೊ ಅಣ್ಣಾ

ಚಿಕ್ಕಿಯ ಮಾಲೆಯ ಸೆಕ್ಕಿಸಿಕೊಂಡು

ಸೂರ್ಯ-ಚಂದ್ರರನು ಮಾಡಿದೆ ಕಣ್ಣಾ

ಹಕ್ಕಿ ಹಾರುತಿದೆ ನೋಡಿದಿರಾ?

ಪ್ರ.VI

Downloaded from scoringtarget.com

10. ಶಬರಿಯ ರಾಮ-ಲಕ್ಷ್ಮಣರನ್ನು ಕಂಡು ಹಿಗ್ಗಿ, ಸಂತಸದಿಂದ ರುಚಿಕರ ಹಣ್ಣುಗಳನ್ನು ನೀಡಿ ಸತ್ಕರಿಸುತ್ತಾಳೆ. ರಾಮನನ್ನು ಕಂಡ ತಾನು ಪರಮಸುಖಿಯೆಂದು ನರ್ತಿಸುತ್ತಾಳೆ. ರಾಮನೂ ಕೂಡ "ನಿನ್ನ ಆದರದಿಂದ ನಾವು ಸುಖಿ, ನಿನಗೆ ನಾವು ಋಣಿ" ಎನ್ನುತ್ತಾನೆ. ಶಬರಿಯ ಕಣ್ಣೀರು ತುಂಬಿಕೊಂಡು "ನನ್ನ ಜಾಡನ್ನು ಹಿಡಿದು ಬಂದು ಸಂತಸ ನೀಡಿದಿರಿ, ಹಸಿವು ತೃಷೆ ಹಿಂಗಿತೆ? ನಾನೊಬ್ಬಳು ಬಡವಿ, ನನ್ನ ಮೇಲೆ ಮರುಕ ತೋರಿದಿರಾ" ಎನ್ನುತ್ತಾಳೆ. ಶ್ರೀರಾಮನು "ನಿನ್ನ ಅತಿಥ್ಯದಲ್ಲಿ ಸ್ವಲ್ಪವೂ ಕೊರತೆಯಿಲ್ಲ, ನಮ್ಮ ಅರಮನೆಗಿಂತ ನಿನ್ನ ಆಶ್ರಮವೇ ಚಂದ, ನೀನೇ ತಾಯಿಯಂತೆ" ಎನ್ನುತ್ತಾಳೆ. ಶಬರಿಯು "ನಿನ್ನ ರೂಪದಂತೆ ನಿನ್ನ ಮಾತು ಸುಂದರ ಹಾಗೂ ಉದಾರ, ನಾನು ಧನ್ಯಳಾದೆ. ಸಿದ್ದರ ವರ ನನಗೆ ಫಲಿಸಿತು. ಗುರುಪೂಜೆಯನ್ನುಮಾಡಿದ ಪುಣ್ಯ ನನಗೆ ಇಂದು ಸೇರಿತು. ನನ್ನ ಚಿಂತೆಯೆಲ್ಲ ಹಿಂಗಿ ಹೋಯಿತು" ಎನ್ನುತ್ತಾಳೆ. ಶ್ರೀರಾಮನು "ದುಃಖವನ್ನು ಮರೆಸಿ, ಶಾಂತಿ ನೀಡುವ ಈ ವನದಲ್ಲಿ ಶುದ್ಧ ಪ್ರೇಮ ಮೂರ್ತಿ ನೀನು" ಎಂದು ಶಬರಿಯನ್ನು ಬಾಯಿತುಂಬ ಹೊಗಳುತ್ತಾನೆ.

**ಅಥವಾ**

ಶಬರಿ ಮತಂಗ ಋಷಿಗಳ ಮಾತನ್ನು ನಂಬಿ ಶ್ರೀರಾಮನ ದರ್ಶನಕ್ಕಾಗಿ ಕಾಯುತ್ತಿದ್ದಳು. ಮತಂಗ ಋಷಿಗಳು ದಿವ್ಯಲೋಕವನ್ನು . ಬಳಿಕ ರಾಮಧ್ಯಾನದಲ್ಲಿ ತೊಡಗಿ ರಾಮನ ದರ್ಶನಕ್ಕಾಗಿ ಕಾದಿದ್ದಳು. ಶ್ರೀರಾಮನಿಗಾಗಿ ದಿನಾಲೂ ಹೂ-ಹಣ್ಣುಹಂಪಲುಗಳನ್ನು ಇಟ್ಟುಕೊಂಡು ರಾಮ ಇವತ್ತು ಬರುವನೋ ನಾಳೆ ಬರುವನೋ ಎಂಬ ಚಿಂತೆಯಲ್ಲಿ ಇರುತ್ತಾಳೆ. ಮತಂಗರ ಮಾತಿನಂತೆ ಒಂದು ದಿನ ರಾಮಲಕ್ಷ್ಮಣರು ಮತಂಗಾಶ್ರಮಕ್ಕೆ ಬರುತ್ತಾರೆ.ಶಬರಿ ಶ್ರೀರಾಮನ ದರ್ಶನದಿಂದ ಪುಳಕಿತಳಾಗುತ್ತಾಳೆ. ತನ್ನ ಮನದ ಬಯಕೆಯಂತೆ ಹೂಮಾಲೆಯನ್ನು ಹಾಕಿ,ಹಣ್ಣು-ಹಂಪಲುಗಳನ್ನು ಕೊಟ್ಟು ತನ್ನ ಮನದ ಬಯಕೆಯನ್ನು ಒಡ್ಡಿಕೊಂಡು ಧನ್ಯಳಾಗುತ್ತಾಳೆ .ಮುಕ್ತಿಯನ್ನು ಪಡೆಯುತ್ತಾಳೆ. ಹೀಗೆ ತಾಳುವಿಕೆಗಿಂತ ತಪವಿಲ್ಲ ಎನ್ನುವ ಮಾತು ಶಬರಿಯ ಪಾಲಿಗೆ ನಿಜವಾಗಿದೆ.

Downloaded from scoringtarget.com